# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 903 (1037) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ |
| ಉತ್ತರಿಸುವ ದಿನಾಂಕ | : | 24-02-2023 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ವಸತಿ ನಿಲಯದಲ್ಲಿ ವಾಸಿಸುವ ಮಕ್ಕಳಿಗೆ ಶಾಲಾ ಬ್ಯಾಗ್ ಶೂ ಟ್ರ್ಯಾಕ್‌ಸೂಟ್ ವಿತರಿಸಲಾಗಿದೆಂದು ಕಳೆದ ಅಧಿವೇಶನದಲ್ಲಿ ಸರ್ಕಾರವು ಭರವಸೆ ನೀಡಿರುವುದು ನಿಜವೇ; | ಹೌದು.<br>2021-22ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಸಂಬಂಧ ಅಗತ್ಯವಿರುವ ಶಾಲಾ ಬ್ಯಾಗ್‌ಗಳು ಶೂ ಮತ್ತು ಸಾಕ್ಸ್‌ಗಳು ಟ್ರ್ಯಾಕ್ ಸೂಟ್ ಸ್ವೆಟರ್ ಇತ್ಯಾದಿ ಸಾಮಗ್ರಿಗಳನ್ನು ಒದಗಿಸಲಾಗಿರುತ್ತದೆ. |
| ಆ) | ಇದುವರೆವಿಗೂ ಅವುಗಳನ್ನು ಮಕ್ಕಳಿಗೆ ನೀಡದಿರಲು ಕಾರಣಗಳೇನು; | ಸದರಿ ಸಾಮಗ್ರಿಗಳನ್ನು 2021-22ನೇ ಸಾಲಿಗೆ ದಾಖಲಾದ ವಿದ್ಯಾರ್ಥಿಗಳಿಗೆ ವಿತರಣೆ ಮಾಡಲಾಗಿರುತ್ತದೆ. |
| ಇ) | ಈ ಸಾಮಗ್ರಿಗಳನ್ನು ನೀಡದಿರುವುದಕ್ಕೆ ಕಾರಣಕರ್ತರು ಯಾರು ಮತ್ತು ಕಾರಣಗಳೇನು? (ವಿವರ ನೀಡುವುದು) | ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು 2018-19ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ವಿವಿಧ ಅಭಿವೃದ್ಧಿ ಯೋಜನೆಯಡಿ ಅನುದಾನವನ್ನು ಒದಗಿಸಲಾಗಿರುತ್ತದೆ. ಸದರಿ ಅನುದಾನದಲ್ಲಿ ಸರ್ಕಾರದ ಆದೇಶ ಸಂಖ್ಯೆ:ಸಕಇ 54 ಪಕವಿ 2020, ದಿನಾಂಕ:18-03-2020ರಲ್ಲಿ ರಾಜ್ಯವಲಯದಿಂದ ವಿದ್ಯಾರ್ಥಿನಿಲಯಗಳಿಗೆ ಅಗತ್ಯವಿರುವ ಸಾಮಗ್ರಿಗಳಾದ ಟೂ ಟ್ರಯರ್ ಕಾಟ್, ಸೋಲಾರ್ ವಾಟರ್ ಹೀಟರ್, ಡೈನಿಂಗ್ ಟೇಬಲ್, ಕಾಯರ್ ಮ್ಯಾಟ್ರಸ್ ಮತ್ತು ಪಿಲ್ಲೋ, ಸಿಸಿಟಿವಿ, ಡೀಸೆಲ್ ಜನರೇಟರ್, ಜಮಖಾನ ಬೆಡ್ ಶೀಟ್, ಟ್ರ್ಯಾಕ್‌ಸೂಟ್, ಸ್ವೆಟರ್, ನೈಟ್‌ಡ್ರಸ್ ಮತ್ತು ಶಾಲಾ ಬ್ಯಾಗ್‌ಗಳನ್ನು ಸರಬರಾಜು ಮಾಡಲಾಗಿರುತ್ತದೆ. 2019-20, 2020-21 ಹಾಗೂ 2021-22ನೇ ಸಾಲಿನಲ್ಲಿ ವಿದ್ಯಾರ್ಥಿನಿಲಯಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ. |

**ಸಕಇ 62 ಎಸ್‌ಎಲ್ ಪಿ 2023**

**(ಕೋಟ ಶ್ರೀನಿವಾಸ ಪೂಜಾರಿ)**
**ಸಮಾಜ ಕಲ್ಯಾಣ ಹಾಗೂ**
**ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು**